ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು-560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 23.08.2022

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 24-08-2022 ರಿಂದ 28-08-2022 ವರೆಗೆ)

| ನಿಯತಾಂಕಗಳು | 24.8.2022 | 25.8.2022 | 26.8.2022 | 27.8.2022 | 28.8.2022 |
|---|---|---|---|---|---|
| ಮಳೆ (ಮಿ ಮಿ) | 2 | 3 | 4 | 4 | 5 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 31 | 32 | 32 | 32 | 32 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 19 | 20 | 20 | 20 | 20 |
| ಮೋಡ ( ಪ್ರಮಾಣ) | 8 | 8 | 8 | 8 | 8 |
| ಅರ್ದ್ರತೆ 7.20 ಬೆ (ಶೇ) | 74 | 74 | 74 | 76 | 76 |
| ಅರ್ದ್ರತೆ 2.20 ಮ (ಶೇ) | 51 | 52 | 52 | 56 | 56 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 6 | 6 | 5 | 6 | 6 |
| ಗಾಳಿಯ ದಿಕ್ಕು ( ಡಿಗ್ರಿ) | 292 | 292 | 297 | 292 | 292 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾದ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ 31.0-32.0$^{o}$ C ಮತ್ತು ಕನಿಷ್ಠ 19.0-20.0$^{o}$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **74-76 %** ಇದ್ದು ಮಧ್ಯಾಹ್ನ **51-56 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **5-6** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

**"ಮಗೆ ಮಳೆ ಹುಯ್ದರೆ, ಬೆಳೆಯೆಲ್ಲಾ ಸಮೃದ್ಧ !"**

- ಮಗೆ ನಕ್ಷತ್ರದ ಮಳೆಯ ಕಾಲವು ಆಗಸ್ಟ್ ತಿಂಗಳ 17 ರಿಂದ ಆಗಸ್ಟ್ 30 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 62.8 ಮಿ.ಮೀ. ವರೆಗೆ ಮಳೆಯಾಗುತ್ತದೆ.

## ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ ಸಲಹೆಗಳು | | 1. ಹಗುರ ಮಳೆಯ ಅವಕಾಶ ಇರುವುದರಿಂದ ತೇವಾಂಶದ ಆಧಾರದಲ್ಲಿ ಮುಂಗಾರು ಬಿತ್ತನೆಯನ್ನು ಮುಂದುವರಿಸಿ.<br>2. ಆಯಾ ವಲಯ ಪ್ರದೇಶಕ್ಕೆ ಶಿಫಾರಸ್ಸು ಮಾಡಿದ ತಳಿಗಳನ್ನೇ ಬಿತ್ತನೆಗೆ ಬಳಸುವುದು ಸೂಕ್ತ.<br>3. ಈಗಾಗಲೇ ಬಿತ್ತನೆಯಾಗಿರುವ ತೊಗರಿ ಮತ್ತು ಜೋಳದ ಬೆಳೆಗಳಲ್ಲಿ ಮೇಲು ಗೊಬ್ಬರವನ್ನು ಕೊಡಬೇಕು. |
| ಮುಂಗಾರು ಬೆಳೆಗಳು | ಬಿತ್ತನೆ, ಮೊಳಕೆ ಮತ್ತು ಬೆಳವಣಿಗೆ ಹಂತ | **ಎರಡುಬೆಳೆ ಪದ್ದತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ಮೇ ತಿಂಗಳಲ್ಲಿ ಬಿತ್ತಿದ ಪೂರ್ವ ಮುಂಗಾರು ಬೆಳೆಗಳನ್ನು ಕಟಾವು ಮಾಡಿ ತಕ್ಷಣ ತಡವಾದ ಮುಂಗಾರು ಬೆಳೆಗಳಾದ ರಾಗಿ: ಕೆ.ಎಮ್,ಆರ್-301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್-365 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್-944, ಕೆ.ಬಿ.ಸಿ-1, ಅವರೆ-ಎಚ್.ಎ-3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್-1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ-9 ಮತ್ತು ಕೆ.ಬಿ.ಎಚ್-1, ಹುಚ್ಚೆಳ್ಳು ತಳಿಗಳನ್ನು ಆಗಸ್ಟ್ ತಿಂಗಳ ಒಳಗಾಗಿ ಬಿತ್ತನೆ/ನಾಟಿ ಮಾಡುವುದು.<br>ಮುಸುಕಿನ ಜೋಳ: ಗಂಗಾ-11, ಡೆಕ್ಕನ್-103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎನ್.ಏ.ಸಿ-6004,6002,<br>ನಿತ್ಯಶ್ರೀ-ಸಂಕರಣ ತಳಿ ಮತ್ತು ಹೇಮ -ಸಂಕರಣ ತಳಿ ಬಿತ್ತಲು ಸೂಚಿಸಲಾಗಿದೆ.<br>ಮೇಲಿನ ಮುಸುಕಿನ ಜೋಳ ತಳಿಗಳು ಕೇದಿಗೆ ರೋಗ, ಎಲೆ ಅಂಗಮಾರಿ ರೋಗ ಮತ್ತು ಕಾಂಡ |

| | | |
|---|---|---|
| | | ಕೊರೆಯುವ ಕೀಟ ನಿರೋಧಕ ಶಕ್ತಿ ಹೊಂದಿವೆ. |
| ಮಾವು | | 1. ಮಾವಿನಲ್ಲಿ ಒತ್ತಾಗಿ ಬೆಳೆದಿರುವ ರೆಂಬೆಗಳನ್ನು ಕತ್ತರಿಸಬೇಕು ಇದರಿಂದ ಸೂರ್ಯನ ಬೆಳಕು ಒಳಬಾಗಕ್ಕೆ ಬೀಳುತ್ತದೆ ಇದರಿಂದ ಒಳಭಾಗದಲ್ಲೂ ಮುಂದಿನ ಬಾರಿ ಹೂ ಮತ್ತು ಕಾಯಿ ಕಚ್ಚುತ್ತವೆ.<br>2. ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| **ರೇಷ್ಮೆ ಸಾಕಾಣಿಕೆ** | | 1. ರೇಷ್ಮೆ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು. |
| **ಹೈನುಗಾರಿಕೆ** | | |
| | | |
| **ಪಶುಸಂಗೋಪನೆ** | | ➢ **ನೆರಡಿ ರೋಗ:** ಜ್ವರ, ಕೆಲವೊಮ್ಮೆ ಇದ್ದಕ್ಕಿದ್ದ ಹಾಗೆ ದನಗಳು ಸಾಯುವುದು, ಮೇವು ಬಿಡುವುದು, ಹೆಚ್ಚು ನಾಡಿ ಬಡಿತ, ಉಸಿರಾಟ, ಸಾವಿನ ಸಮಯದಲ್ಲಿ ಮೂಗು, ಬಾಯಿ ಮತ್ತು ಗುದದ್ವಾರದಿಂದ ರಕ್ತಸ್ರಾವವಾಗುತ್ತದೆ. ಇದರ ಹತೋಟಿಗೆ ಪ್ರತಿ ವರ್ಷ **ಜುಲೈ/ಆಗಸ್ಟ್** ತಿಂಗಳಲ್ಲಿ ಈ ರೋಗದ ಲಸಿಕೆಯನ್ನು ಕೊಡಿಸಿ ತಡೆಗಟ್ಟಬಹುದು.<br>➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಸೂಕ್ತವಾದ ಹವಾಮಾನ ಮತ್ತು ಯತೇಚ್ಚ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>1. ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಫ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.